# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 404 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್.ಕೆ.ರಾಥೋಡ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 19-02-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| ಪ್ರಶ್ನೆ | | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ರೈತರ ಪಂಪ್ ಸೆಟ್ ಗಳಿಗೆ ಎಷ್ಟು ಗಂಟೆಗಳ ಕಾಲ 3 ಫೇಸ್ ವಿದ್ಯುತ್ ನೀಡಲಾಗುತ್ತಿದೆ; | ರೈತರ ಪಂಪ್ ಸೆಟ್ಟುಗಳಿಗೆ ಸರ್ಕಾರದ ಆದೇಶದಂತೆ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ತನ್ನು ಸರಬರಾಜು ಮಾಡಲಾಗುತ್ತಿದೆ. |
| ಆ) | ರೈತರು ರಾತ್ರಿಯ ಬದಲು ಹಗಲಿನಲ್ಲಿ ವಿದ್ಯುತ್ ಒದಗಿಸುವ ಬಗ್ಗೆ ಬೇಡಿಕೆ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ತಾಂತ್ರಿಕವಾಗಿ ಸಾಧ್ಯತೆ ಇರುವ ಪ್ರದೇಶಗಳಲ್ಲಿ ರೈತರ ಪಂಪ್ ಸೆಟ್ಟುಗಳಿಗೆ ಹಗಲಿನ ವೇಳೆಯಲ್ಲಿ ನಿರಂತರ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ತನ್ನು ಸರಬರಾಜು ಮಾಡಲಾಗುತ್ತಿದೆ.<br>ತಾಂತ್ರಿಕವಾಗಿ ಸಾದ್ಯತೆ ಇಲ್ಲದಿರುವ ಪ್ರದೇಶಗಳಲ್ಲಿ ಮಾತ್ರ ಪಾಳಿಯಲ್ಲಿ 7 ಗಂಟೆಗಳ ಕಾಲ (ಹಗಲಿನ ವೇಳೆ 4 ಗಂಟೆ ಹಾಗೂ ರಾತ್ರಿ ವೇಳೆ 3 ಗಂಟೆಗಳ ಕಾಲ) 3 ಫೇಸ್ ವಿದ್ಯುತ್ತನ್ನು ರೈತರ ಪಂಪ್ ಸೆಟ್ಟುಗಳಿಗೆ ಸರಬರಾಜು ಮಾಡಲಾಗುತ್ತಿದೆ. |
| ಇ) | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು? | ಕೃಷಿ ಫೀಡರ್‌ಗಳಿಗೆ ಹಗಲಿನ ವೇಳೆಯಲ್ಲಿಯೇ ನಿರಂತರ 3-ಫೇಸ್ ವಿದ್ಯುತ್ ಸರಬರಾಜನ್ನು ವ್ಯವಸ್ಥೆ ಮಾಡಲು ಈ ಕೆಳಗಿನಂತೆ ಕ್ರಮ ವಹಿಸಲಾಗಿದೆ.<br>1) KUSUM-C ಮಾದರಿಯಲ್ಲಿ ಫೀಡರ್‌ಗಳ ಸೌರೀಕರಣ.<br>2) KUSUM-B ಮಾದರಿಯಲ್ಲಿ ಸೌರೀಕೃತ ಕೃಷಿ ಪಂಪ್‌ಗಳ ಅಳವಡಿಕೆ. |

ಸಂಖ್ಯೆ: ಎನರ್ಜಿ 44 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು